ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೨೭

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೊಂಬತ್ತನೇ ಅಧಿವೇಶನ
## (ಮುಂದುವರೆದ ಉಪವೇಶನ)

**ಮಂಗಳವಾರ, ದಿನಾಂಕ: ೨೪ನೇ ನವೆಂಬರ್, ೨೦೧೫**

---

**ಸಮೂಹ – II**

೧. ಇಂಧನ ಸಚಿವರು
೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು
೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು
೪. ಲೋಕೋಪಯೋಗಿ ಸಚಿವರು
೫. ಸಹಕಾರ ಮತ್ತು ಸಕ್ಕರೆ ಸಚಿವರು
೬. ಕೃಷಿ ರಾಜ್ಯ ಸಚಿವರು
೭. ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು

---

## ಬೆಂಗಳೂರು – ಮೈಸೂರು ರಸ್ತೆಯನ್ನು ಷಟ್ಪಥ ರಸ್ತೆಯನ್ನಾಗಿ ಪರಿವರ್ತಿಸುವ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೧ (೩೦೧೦) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು–ಮೈಸೂರು ರಸ್ತೆಯನ್ನು ಆರು ಪಥ (ಷಟ್ಪಥ) ರಸ್ತೆಯನ್ನಾಗಿ ಪರಿವರ್ತನೆ ಮಾಡುವ ಯೋಜನೆಯನ್ನು ಸರ್ಕಾರ ರೂಪಿಸಿದೆಯೇ ;

(ಆ) ಹಾಗಾದರೆ, ಆ ಯೋಜನೆಯನ್ನು ಯಾವಾಗ ಕಾರ್ಯಗತ ಮಾಡಲಾಗುವುದು; ಯೋಜನೆಯ ಅನುಷ್ಠಾನ ಯಾವ ಹಂತದಲ್ಲಿದೆ ? (ಪೂರ್ಣ ವಿವರ ನೀಡುವುದು)

## ರೈತರ ಆತ್ಮಹತ್ಯೆ ತಡೆಗಟ್ಟಲು ಕೈಗೊಂಡ ಕ್ರಮದ ಕುರಿತು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೨ (೩೨೯೯) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಆ) ಪರಿಹಾರ ವಿತರಣೆ ಕಾರ್ಯವನ್ನು ಸರ್ಕಾರ ಪೂರ್ಣಗೊಳಿಸಿದೆಯೇ ;

(ಇ) ಇದುವರೆಗೂ ವಿತರಿಸಿದ ಪರಿಹಾರದ ಮೊತ್ತ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಪರಿಹಾರಕ್ಕೆ ಅರ್ಹರಿಲ್ಲದ ಪ್ರಕರಣಗಳೇನಾದರೂ ಇವೆಯೇ ಹಾಗೂ ಪರಿಹಾರ ನೀಡದಿರುವುದಕ್ಕೆ ಕಾರಣವೇನು ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಉ) ಕೊಪ್ಪಳ ಜಿಲ್ಲೆಯಲ್ಲಿ ಇದುವರೆಗೂ ಪರಿಹಾರ ನೀಡದೇ ಇರುವ ಪ್ರಕರಣಗಳೇನಾದರೂ ಇವೆಯೇ ; ಇದ್ದಲ್ಲಿ, ಇದಕ್ಕೆ ಕಾರಣಗಳೇನು ?

## ರಾಜ್ಯದಲ್ಲಿ ವಿದ್ಯುತ್ ಕೊರತೆ ಮತ್ತು ಉತ್ಪಾದನೆ ಬಗ್ಗೆ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) –**

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೩ (೩೦೧೭+೩೪೦೮) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಪ್ರಸ್ತುತ ಬೇಡಿಕೆ ಇರುವ ಹಾಗೂ ಪೂರೈಕೆಯಾಗುತ್ತಿರುವ ವಿದ್ಯುತ್ ಪ್ರಮಾಣ ಎಷ್ಟು ; (ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ರಾಜ್ಯದಲ್ಲಿ ವಿವಿಧ ಮೂಲಗಳಿಂದ ಉತ್ಪತ್ತಿಯಾಗಿ ಲಭ್ಯವಾಗುತ್ತಿರುವ ವಿದ್ಯುತ್ ಪ್ರಮಾಣ ಎಷ್ಟು ; (ಪ್ರತ್ಯೇಕ ಮಾಹಿತಿ ಒದಗಿಸುವುದು)

(ಇ) ವಿದ್ಯುತ್ ಕೊರತೆ ನೀಗಿಸುವ ನಿಟ್ಟಿನಲ್ಲಿ ಕಳೆದ ಐದು ವರ್ಷಗಳ ಅವಧಿಯಲ್ಲಿ ಖರೀದಿಸಲಾದ ವಿದ್ಯುತ್ ಪ್ರಮಾಣ ಎಷ್ಟು ; ಯಾವ ಮೂಲಗಳು, ಸಂಸ್ಥೆ, ಅವಧಿ, ಪಾವತಿಸಲಾದ ಮೊತ್ತ, ಪ್ರತಿ ಮೆಗಾವ್ಯಾಟ್‌ಗೆ ನಿಗದಿಪಡಿಸಿ ಖರೀದಿಸಿದ ವಿದ್ಯುತ್ ದರ ಕುರಿತಾದ ಪ್ರತ್ಯೇಕ ಸಂಪೂರ್ಣ ಮಾಹಿತಿ ಒದಗಿಸುವುದು ;

(ಈ) ದಿನೇ ದಿನೇ ಹೆಚ್ಚುತ್ತಿರುವ ವಿದ್ಯುತ್ ಬೇಡಿಕೆ ಖರೀದಿ ದರವನ್ನು ಸರಿದೂಗಿಸುವ ನಿಟ್ಟಿನಲ್ಲಿ ಮತ್ತು ವಿದ್ಯುತ್ ಉತ್ಪಾದನೆಯಲ್ಲಿ ಸ್ವಾವಲಂಬನೆ ಸಾಧಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳು ಯಾವುವು ; (ವಿವರ ನೀಡುವುದು)

(ಉ) ಬೆಂಗಳೂರಿನಲ್ಲಿ ವಿದ್ಯುತ್ ಕಡಿತದಿಂದ ಕೈಗಾರಿಕೆಗಳು ಮುಚ್ಚುವ ಪರಿಸ್ಥಿತಿ ಎದುರಾಗಿದ್ದು, ಇದಕ್ಕಾಗಿ ಸರ್ಕಾರ ತೆಗೆದುಕೊಳ್ಳುತ್ತಿರುವ ಕ್ರಮವೇನು ?

## ತೋಟಗಾರಿಕಾ ಇಲಾಖೆಯಿಂದ ಹನಿ ನೀರಾವರಿಗೆ ನೀಡುತ್ತಿರುವ ಪ್ರೋತ್ಸಾಹದ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೪ (೩೪೨೨) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತೋಟಗಾರಿಕಾ ಇಲಾಖೆಯಿಂದ ಯಾವ ಯಾವ ಬೆಳೆಗಳಿಗೆ ಹನಿ ನೀರಾವರಿ ಅಳವಡಿಕೆಗೆ ಸಬ್ಸಿಡಿ ನೀಡಲಾಗುತ್ತಿದೆ ;

(ಆ) ಇದನ್ನು ಪಡೆಯಲು ರೈತರಿಗಿರಬೇಕಾದ ಅರ್ಹತೆಯೇನು ; ಅವುಗಳನ್ನು ಪಡೆಯುವ ವಿಧಾನವೇನು ;

(ಇ) ೨೦೧೩–೧೪ ರಿಂದ ೨೦೧೫ರವರೆಗೆ ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರದ ಎಷ್ಟು ರೈತರು ಸಬ್ಸಿಡಿಗಾಗಿ ಅರ್ಜಿ ಸಲ್ಲಿಸಿದ್ದಾರೆ ; ಎಷ್ಟು ಜನರಿಗೆ ಸಬ್ಸಿಡಿ ನೀಡಲಾಗಿದೆ ;

(ಈ) ತೋಟಗಾರಿಕಾ ಬೆಳೆಗಳಿಗೆ ಹನಿ ನೀರಾವರಿ ಅಳವಡಿಕೆಯ ಉತ್ತೇಜನಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ರೈತರು ಹನಿ ನೀರಾವರಿ ಅಳವಡಿಸಿ ವರ್ಷಗಳು ಕಳೆದರೂ ಸಹ ಇಲಾಖೆಯಿಂದ ಸಬ್ಸಿಡಿ ಹಣ ಮಂಜೂರು ಮಾಡದಿರುವುದರಿಂದ ಆಗುತ್ತಿರುವ ತೊಂದರೆ ನಿವಾರಿಸಿ ೨ ತಿಂಗಳೊಳಗೆ ಹಣ ಬಿಡುಗಡೆಗೆ ಸರ್ಕಾರ ಕೈಗೊಳ್ಳುವ ಕ್ರಮವೇನು :?

## ರಾಯಚೂರು ಜಿಲ್ಲೆಯಲ್ಲಿ ಬರುವ ಶಕ್ತಿನಗರ, ಯದ್ಲಾಪುರ ವಿದ್ಯುತ್ ಸ್ಥಾವರಗಳ ಉತ್ಪಾದನೆ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೫ (೩೩೮೯) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರು ಜಿಲ್ಲೆಯಲ್ಲಿ ಬರುವ ಶಕ್ತಿನಗರ, ಯದ್ಲಾಪುರ, ಯರಮರಸ್‌ಗಳಲ್ಲಿ ಕರ್ನಾಟಕ ಪವರ್ ಕಾರ್ಪೋರೇಷನ್ (KPC) ವತಿಯಿಂದ ನಿರ್ಮಿಸಿರುವ ವಿದ್ಯುತ್ ಸ್ಥಾವರಗಳ ಉತ್ಪಾದನೆಗೆ ತೆಗೆದುಕೊಂಡ ಭೂಮಿ ಎಷ್ಟು ; (ಸಂಪೂರ್ಣ ವಿವರ ನೀಡವುದು)

(ಆ) ಒಟ್ಟು ಎಷ್ಟು ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಯಾಗುತ್ತಿದೆ ;

(ಇ) ಇದರಿಂದ ರಾಯಚೂರು ಭಾಗದಲ್ಲಿ ಮಾಲಿನ್ಯ ಹಾಗೂ ಉಷ್ಣತೆ ಹೆಚ್ಚಾಗಿದ್ದು ಸಾರ್ವಜನಿಕರಿಗೆ ಆಗುವ ತೊಂದರೆ ಸರ್ಕಾರದ ಗಮನದಲ್ಲಿದೆಯೇ ;

(ಈ) ರಾಯಚೂರು ಜಿಲ್ಲೆಯ ಜನರ ಬೇಡಿಕೆಯಂತೆ ನಿರಂತರ ವಿದ್ಯುತ್ ಸರಬರಾಜು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಉ) ರಾಜ್ಯದ ಇತರೆ ಭಾಗಗಳಲ್ಲಿ / ಜಿಲ್ಲೆಗಳಲ್ಲಿ (ಉಡುಪಿ ಜಿಲ್ಲೆ) ನಿರಂತರ ವಿದ್ಯುತ್ ಸರಬರಾಜು (24 hours) ಮಾಡುವ ಯೋಜನೆಗೆ ಸರ್ಕಾರ ಅನುಮೋದನೆ ನೀಡಿದೆಯೇ ?

## ಬಿತ್ತನೆ ಬೀಜಗಳ ಸರಬರಾಜು ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೩೯೬ (೩೨೩೬) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯ ಬೀಜ ನಿಗಮವು ಅಸ್ತಿತ್ವಕ್ಕೆ ಬಂದಿದ್ದು ಯಾವಾಗ ; ಈ ನಿಗಮದ ಆಡಳಿತ ಮಂಡಳಿಯ ಪಟ್ಟಿಯನ್ನು ನೀಡುವುದು ;

(ಆ) ಈ ನಿಗಮದ ಉದ್ದೇಶಗಳೇನು ; ಈ ನಿಗಮದಿಂದ ರೈತರಿಗೆ ಆಗುತ್ತಿರುವ ಪ್ರಯೋಜನ ಏನು ;

(ಇ) ರಾಜ್ಯಕ್ಕೆ ಒಟ್ಟಾರೆ ವಾರ್ಷಿಕವಾಗಿ ಬೇಕಾಗುವ ಪ್ರಮಾಣೀಕೃತ ಬಿತ್ತನೆ ಬೀಜದ ಪ್ರಮಾಣ ಎಷ್ಟು ; (ಬೆಳೆಗಳು ಮತ್ತು ಉತ್ಪನ್ನವಾರು ವಿವರ ನೀಡುವುದು)

(ಈ) ಕರ್ನಾಟಕ ರಾಜ್ಯ ಬೀಜ ನಿಗಮದಿಂದ ವಾರ್ಷಿಕವಾಗಿ ಎಷ್ಟು ಪ್ರಮಾಣೀಕೃತ ಬಿತ್ತನೆ ಬೀಜಗಳನ್ನು ಸರಬರಾಜು ಮಾಡಲಾಗುತ್ತಿದೆ ; (ಬೆಳೆವಾರು ವಿವರಗಳನ್ನು ನೀಡುವುದು)

(ಉ) ಕರ್ನಾಟಕ ರಾಜ್ಯ ಬೀಜ ನಿಮಗವು ಉದ್ದೇಶಿತ ಪ್ರಮಾಣದಲ್ಲಿ ಕೆಲಸ ನಿರ್ವಹಿಸುತ್ತಿದೆಯೇ ; ಹಾಗಿದ್ದಲ್ಲಿ, ಖಾಸಗಿ ಬೀಜ ಉತ್ಪಾದನಾ ಕಂಪನಿಗಳ ಹಾವಳಿಯನ್ನು ತಪ್ಪಿಸಬಹುದಲ್ಲವೇ ; ಹಾವಳಿ ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಚಿತ್ರದುರ್ಗ ಜಿಲ್ಲೆಗೆ ೮ ಗಂಟೆಗಳ ಕಾಲ ವಿದ್ಯುತ್ ಪೂರೈಸುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೭ (೨೯೯೫) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿತ್ರದುರ್ಗ ಜಿಲ್ಲೆಯಾದ್ಯಂತ ಕುಡಿಯುವ ನೀರಿಗಾಗಿ ಕೊಳವೆ ಬಾವಿಗಳನ್ನೇ ಅವಲಂಬಿಸಿದ್ದು, ಪ್ರತಿದಿನ ೮ ಗಂಟೆಗಳ ಕಾಲ ವಿದ್ಯುತ್ ಪೂರೈಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಆ) ಕೃಷಿ ಚಟುವಟಿಕೆಗಳಿಗೂ ಕೂಡ ಜಿಲ್ಲೆಯಾದ್ಯಂತ ಕೊಳವೆ ಬಾವಿ ನೀರನ್ನೇ ಅವಲಂಬಿಸಿದ್ದು, ೮ ಗಂಟೆಗಳ ಕಾಲ ವಿದ್ಯುತ್ ಪೂರೈಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಇ) ಇದ್ದಲ್ಲಿ, ಯಾವಾಗಿನಿಂದ ಕಾರ್ಯರೂಪಕ್ಕೆ ತರಲಾಗುವುದು ?

## ಎಸ್‌ಸಿಪಿ/ಟಿಎಸ್‌ಪಿ ಅಡಿಯಲ್ಲಿ ನಿಗದಿಪಡಿಸಿರುವ ಅನುದಾನ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೮ (೩೦೦೫) ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೪–೧೫ ಹಾಗೂ ೨೦೧೫–೧೬ನೇ ಸಾಲುಗಳಲ್ಲಿ ಎಸ್‌ಸಿಪಿ/ಟಿಎಸ್‌ಪಿ ಅಡಿಯಲ್ಲಿ ಎಷ್ಟು ಹಣ ನಿಗಧಿಪಡಿಸಲಾಗಿದೆ ; ಖರ್ಚು ಮಾಡಲಾದ ಹಣ ಎಷ್ಟು ; ಯಾವ ಯಾವ ಯೋಜನೆಗಳಿಗಾಗಿ ಈ ಹಣವನ್ನು ಖರ್ಚು ಮಾಡಲಾಗಿದೆ ;

(ಆ) ಇಲಾಖೆಯಲ್ಲಿ ಜಾರಿಯಲ್ಲಿದ್ದ ಅಮೃತ ಯೋಜನೆಯನ್ನು ಮುಂದುವರೆಸಲಾಗಿದೆಯೇ ;

(ಇ) ಎಷ್ಟು ಮಂದಿಗೆ ಈ ಯೋಜನೆಯಿಂದ ಹಸುಗಳನ್ನು ನೀಡಲಾಗಿದೆ ; ಈ ಯೋಜನೆಯ ಘಟಕದ ವೆಚ್ಚ ಎಷ್ಟು ?

## ಅಲ್ಪಸಂಖ್ಯಾತರ ಅಭಿವೃದ್ಧಿಗೆ ಹಾಕಿಕೊಂಡಿರುವ ಯೋಜನೆಗಳು

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೯ (೩೦೦೯) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೪–೧೫ನೇ ಸಾಲಿಗೆ ಅಲ್ಪಸಂಖ್ಯಾತರ ಅಭಿವೃದ್ಧಿಗೆ ಸರ್ಕಾರ ಯಾವ ಯಾವ ಯೋಜನೆಗಳನ್ನು ರೂಪಿಸಿದೆ ;

(ಆ) ಸದರಿ ಯೋಜನೆಗಳಿಗೆ ಸರ್ಕಾರ ಎಷ್ಟು ಹಣವನ್ನು ನಿಗದಿಪಡಿಸಿದೆ ? (ಯೋಜನಾವಾರು ವಿವರ ಒದಗಿಸುವುದು)

## ಕಬ್ಬಿನ ಬಾಕಿ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೪೦೦ (೩೦೧೫) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ರೈತರಿಗೆ ನೀಡಬೇಕಾದ ಕಬ್ಬಿನ ಬಾಕಿ ಮೊತ್ತ ಎಷ್ಟು ಹಾಗೂ ಹಾವೇರಿ ಜಿಲ್ಲೆಯಲ್ಲಿ ನೀಡಬೇಕಾದ ಕಬ್ಬಿನ ಬಾಕಿ ಮೊತ್ತ ಎಷ್ಟು ;

(ಆ) ರೈತರಿಗೆ ನೀಡಬೇಕಾದ ಕಬ್ಬಿನ ಬಾಕಿ ನೀಡದೇ ವಂಚಿಸುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಹಾವೇರಿ ಜಿಲ್ಲೆಯಲ್ಲಿ ಸಹಾಯಧನ ಪಡೆಯಲಾದ ರೈತರ ಸಂಖ್ಯೆ ಎಷ್ಟು ; (ಫಲಾನುಭವಿವಾರು ವಿಳಾಸದೊಂದಿಗೆ ಮಾಹಿತಿ ಒದಗಿಸುವುದು)

(ಈ) ಕಬ್ಬು ಬೆಳೆಯುವ ರೈತರಿಗೆ ಸರ್ಕಾರದಿಂದ ದೊರೆಯುವ ಸೌಲಭ್ಯಗಳೇನು ; ಹಾವೇರಿ ಜಿಲ್ಲೆಯಲ್ಲಿ ಈ ಸೌಲಭ್ಯಗಳನ್ನು ಪಡೆದುಕೊಂಡ ರೈತರ ಸಂಖ್ಯೆ ಎಷ್ಟು ? (ಯೋಜನೆವಾರು ಫಲಾನುಭವಿವಾರು ಮಾಹಿತಿ ಒದಗಿಸುವುದು)

## ಸೌರಶಕ್ತಿ ಬಳಕೆಗೆ ಹೊಸ ಯೋಜನೆ ಬಗ್ಗೆ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೦೧ (೩೪೦೦) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ವಿಪುಲವಾಗಿರುವ ಸೌರಶಕ್ತಿಯ ಬಳಕೆಗೆ ಇಂಧನ ಇಲಾಖೆ ಯಾವುದಾದರು ಹೊಸ ಯೋಜನೆಗಳನ್ನು ಹಮ್ಮಿಕೊಂಡಿದೆಯೇ ;

(ಆ) ಈ ಜಿಲ್ಲೆಗಳಲ್ಲಿ ಸೌರಶಕ್ತಿ ಬಳಕೆಯನ್ನು ಉತ್ತೇಜಿಸಲು ಇಲಾಖೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ತೋಟಗಾರಿಕಾ ವಿಜ್ಞಾನಗಳ ವಿ.ವಿ.ಗೆ ಹೆಚ್ಚಿನ ಅನುದಾನ ನೀಡುವ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೪೦೨ (೩೩೭೫) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ವಿವಿಧ ಕೃಷಿ ವಿಶ್ವವಿದ್ಯಾಲಯಗಳಿಗೆ ಹೋಲಿಸಿದರೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಆಯವ್ಯಯದಲ್ಲಿ ನೀಡಲಾದ ಧನಸಹಾಯ ತುಂಬಾ ಕಡಿಮೆಯಾಗಿರುವುದು ನಿಜವೇ ;

(ಆ) ಹೊಸ ವಿಶ್ವವಿದ್ಯಾಲಯ ಆಗಿರುವುದರಿಂದ ಮೂಲಭೂತ ಸೌಕರ್ಯಗಳಾದ ಹಾಸ್ಟೆಲ್, ಪ್ರಯೋಗಾಲಯ, ವಾಚನಾಲಯ, ಬೋಧನಾ ಕೊಠಡಿ ಇತ್ಯಾದಿಗಳಿಗೆ ಅವಶ್ಯಕತೆಯಿರುವುದರಿಂದ ಅವಶ್ಯಕ ಧನಸಹಾಯವನ್ನು ನೀಡಲು ಸರ್ಕಾರ ಮುಂದಾಗುವುದೇ ?

## ಬೆಂಗಳೂರಿನಲ್ಲಿರುವ ಹಾಪ್‌ಕಾಮ್ಸ್ ಮಳಿಗೆಗಳ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೦೩ (೩೩೮೬) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರಿನಲ್ಲಿರುವ ಹಾಪ್‌ಕಾಮ್ಸ್ ಮಳಿಗೆಗಳ ಸಂಖ್ಯೆ ಎಷ್ಟು ;

(ಆ) ಕಳೆದ ೦೩ ವರ್ಷಗಳಲ್ಲಿ ಎಲ್ಲೆಲ್ಲಿ ಹೊಸದಾಗಿ ಹಾಪ್‌ಕಾಮ್ಸ್ ಮಳಿಗೆಗಳನ್ನು ಪ್ರಾರಂಭಿಸಲಾಗಿದೆ ;

(ಇ) ಈ ಮಳಿಗೆಗಳಲ್ಲಿ ಡಿಜಿಟಲ್ ತೂಕದ ಯಂತ್ರ ಹಾಗೂ ಇತರೆ ಸೌಲಭ್ಯಗಳನ್ನು ಒದಗಿಸಲು ಕೈಗೊಂಡ ಕ್ರಮಗಳೇನು ;

(ಈ) ಈ ಮಳಿಗೆಗಳಲ್ಲಿ ಪ್ರತಿನಿತ್ಯ ದರಪಟ್ಟಿಯನ್ನು ನಮೂದಿಸಲಾಗುತ್ತಿದೆಯೇ;

(ಉ) ಈ ಮಳಿಗೆಗಳಲ್ಲಿ ತೂಕದ ಪ್ರಮಾಣಕ್ಕೆ ನೀಡಬೇಕಾದ ದರದ ಬಗ್ಗೆ ಸೂಚಿಸುವ ಯಂತ್ರಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ ?

## ರಾಷ್ಟ್ರೀಯ ಹೆದ್ದಾರಿಗಳಲ್ಲಿನ ಟೋಲ್‌ಗೇಟ್‌ಗಳ ನಿರ್ವಹಣೆ ಕುರಿತು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೪೦೪ (೩೫೯೭) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರ ಹಾಗೂ ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಹಾಯ್ದು ಹೋಗಿರುವ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಇರುವ ಟೋಲ್‌ಗಳ ಸಂಖ್ಯೆ ಎಷ್ಟು ;

(ಆ) ಈ ಟೋಲ್‌ಗಳನ್ನು ಯಾವ ಸಂಸ್ಥೆಯವರು ನಿರ್ವಹಿಸುತ್ತಿದ್ದಾರೆ ;

(ಇ) ಈ ಟೋಲ್‌ಗಳಲ್ಲಿ ಆಂಬ್ಯುಲೆನ್ಸ್ ಹಾಗೂ ವಿ.ಐ.ಪಿ. ವಾಹನಗಳ ಸಂಚಾರಕ್ಕೆ ಪ್ರತ್ಯೇಕ ಮಾರ್ಗವನ್ನು ನಿಗದಿಪಡಿಸಲಾಗಿದೆಯೇ ;

(ಈ) ನಿಗದಿಪಡಿಸಿದ್ದಲ್ಲಿ, ಈ ಪ್ರತ್ಯೇಕ ಮಾರ್ಗ ನಿರ್ವಹಣೆಗೆ ಬೇಕಾದ ಸಿಬ್ಬಂದಿಯನ್ನು ಸಂಬಂಧಿಸಿದ ಸಂಸ್ಥೆಯವರು ಹಾಕದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಪ್ರತ್ಯೇಕ ಸಿಬ್ಬಂದಿ ನೇಮಿಸಲು ಕೈಗೊಂಡ ಕ್ರಮಗಳೇನು ;

(ಊ) ಈ ಟೋಲ್‌ಗಳಲ್ಲಿನ ಸ್ಥಳೀಯ ಗೂಂಡಾ ಪ್ರವೃತ್ತಿ ನೌಕರರನ್ನು ತೆಗೆದು, ಸೌಜನ್ಯಯುತರನ್ನು ನೇಮಿಸಲು ಸರ್ಕಾರ ಕೈಗೊಳ್ಳುವ ಕ್ರಮವೇನು ?

## ಹೆದ್ದಾರಿಗಳಲ್ಲಿ ಟೋಲ್ ಸಂಗ್ರಹದ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೪೦೫ (೩೪೧೦) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಯಾವ ಯಾವ ಹೆದ್ದಾರಿಗಳಲ್ಲಿ ಟೋಲ್ ಸಂಗ್ರಹಿಸಲಾಗುತ್ತಿದೆ ; ಪ್ರತಿ ಟೋಲ್‌ನ ಅಂತರ ಎಷ್ಟಿರುತ್ತದೆ ; ಟೋಲ್ ಸಂಗ್ರಹಿಸುವ ಸ್ಥಳದಲ್ಲಿ ಸಾರ್ವಜನಿಕರಿಗೆ ಯಾವ ಯಾವ ಅನುಕೂಲತೆಗಳನ್ನು ಮಾಡಲಾಗಿದೆ ;

(ಆ) ಬೆಂಗಳೂರು–ಮೈಸೂರು ರಾಷ್ಟ್ರೀಯ ಹೆದ್ದಾರಿಯಾಗಿ ಪರಿವರ್ತಿಸಲು ಯೋಜನೆ ರೂಪಿಸಲಾಗಿದೆಯೇ ; ರೂಪಿಸಿದ್ದರೆ, ಇದಕ್ಕೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅನುದಾನವೆಷ್ಟು ;

(ಇ) ರಾಜ್ಯದ ಯಾವ ಯಾವ ರಸ್ತೆಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಪರಿವರ್ತಿಸಲಾಗಿದೆ ; ಯಾವ ಯಾವ ರಸ್ತೆಗಳಿಗೆ ಕೇಂದ್ರ ಸರ್ಕಾರ ಸಮ್ಮತಿಸಿದೆ;

(ಈ) ರಾಜ್ಯ ಲೋಕೋಪಯೋಗಿ ಇಲಾಖೆಗೆ ೨೦೧೩–೧೪, ೨೦೧೪–೧೫ ಮತ್ತು ೨೦೧೫–೧೬ರಲ್ಲಿ ಕೇಂದ್ರ ಸರ್ಕಾರದಿಂದ ಇದುವರೆವಿಗೂ ಯಾವ ಯಾವ ಯೋಜನೆಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು, ಪಿ7, ಕಾ.ಸೂ. 663, ಪ್ರತಿಗಳು 1500